ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 20 ನೇ ಮಾರ್ಚ್, 2020

ಬೆಂಗಳೂರು ನಗರದಲ್ಲಿ ವಾಯು ಮಾಲಿನ್ಯ ಉಂಟುಮಾಡುವ ಮಾರ್ಗಗಳ ಬಗ್ಗೆ

ಶ್ರೀ ಪಿ.ಆರ್. ರಮೇಶ(ನಾಮನಿರ್ದೇಶನ ಹೊಂದಿದವರು):-

198 (1666) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಂಗಳೂರು ನಗರದಲ್ಲಿ ಎಲ್ಲಾ ತರಹದ ವಾಹನಗಳು ಪರಿಸರ ಹಾಳು ಮಾಡುವ ಹಾಗೂ ಆರೋಗ್ಯಕ್ಕೆ ಹಾನಿಕರವಾದ ಹೊಗೆಬಿಡುವುದು (ಕಾರ್ಬನ್ ಮೋನಾಕ್ಸೈಡ್) ಯಥೇಚ್ಛವಾಗಿದ್ದು ಇದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಸಾರಿಗೆ ಇಲಾಖೆ ಹಾಗೂ ಪರಿಸರ ಮಾಲಿನ್ಯ ಮಂಡಳಿ ಯಾವ ಕ್ರಮಗಳನ್ನು ಕೈಗೊಂಡಿವೆ ;

(ಇ) ಕೆ.ಎಸ್.ಆರ್.ಟಿ.ಸಿ. ಮತ್ತು ಬಿ.ಎಂ.ಟಿ.ಸಿ. ವಾಹನಗಳು ಯಥೇಚ್ಛವಾಗಿ ಆರೋಗ್ಯಕ್ಕೆ ಹಾನಿಕರವಾದ ಹೊಗೆ ಬಿಡುತ್ತಿದ್ದು, ಈ ಬಗ್ಗೆ ಯಾವ ಕ್ರಮವನ್ನು ಕೈಗೊಂಡಿದೆ ;

(ಈ) ಆಟೋ, ಟ್ಯಾಕ್ಸಿ ಮುಂತಾದ ಸಾರ್ವಜನಿಕ ವಾಹನಗಳಿಂದ ಯಥೇಚ್ಛವಾಗಿ ಕಪ್ಪು ಹೊಗೆ ಬರುವುದನ್ನು ನಿಯಂತ್ರಿಸಲು ಸರ್ಕಾರ ಹಾಗೂ ಇಲಾಖೆ ಯಾವ ಕ್ರಮಗಳನ್ನು ಕೈಗೊಂಡಿದೆ ;

(ಉ) ಸಾರ್ವಜನಿಕ ವಾಹನಗಳಾದ ಕೆ.ಎಸ್.ಆರ್.ಟಿ.ಸಿ., ಬಿ.ಎಂ.ಟಿ.ಸಿ. ಆಟೋ ಟ್ಯಾಕ್ಸಿ ಮುಂತಾದ ವಾಹನಗಳ ಚಾಲಕರು ಮೊಬೈಲ್‌ನಲ್ಲಿ ಮಾತನಾಡಿಕೊಂಡು ಚಾಲನೆ ಮಾಡುತ್ತಿರುವುದರಿಂದ ಅಪಘಾತಗಳಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ? (ಮಾಹಿತಿ ನೀಡುವುದು)